# ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
## ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬೆಳ್ತಂಗಡಿ.

## ಅಪರಾಧ ಪ್ರಕರಣ ಸಂಖ್ಯೆ 834/2017

**ಚಾಸಾಃ 5 ಪ್ರಾಸಾಃ 4**

| | |
|---|---|
| ಹೆಸರು | : ಗಂಗಾಧರ್ ಬಿ |
| ತಂದೆಯ ಹೆಸರು | : ಪದ್ಮನಾಭ ಆಚಾರ್ಯ |
| ಪ್ರಾಯ | : 57 ವರ್ಷ |
| ಉದ್ಯೋಗ | : ಅಕ್ಕಸಾಲಿಗ |
| ವಾಸ | : ಬೆಳ್ತಂಗಡಿ ತಾಲೂಕು |

ದಿನಾಂಕ 12-6-2024 ರಂದು ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ

1 ನೇ ಆರೋಪಿಯ ಪರಿಚಯ ಇರುವುದಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯ ದೃಡೀಕೃತ ಪ್ರತಿಯನ್ನು ಆರೋಪಿಗಳ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ-7 ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಹಾಕಿರುತ್ತೇನೆಂದು ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ ಹಾಗೂ ಏನನ್ನೂ ಅಮಾನತುಪಡಿಸಿಕೊಂಡಿರುವುದಿಲ್ಲ. ನಾನು ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಚಿನ್ನ ಪರೀಕ್ಷೆ ಮಾಡಿರುತ್ತೇನೆ. ನಿಪಿ-7 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

*(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)*

ಪಾಟೀ ಸವಾಲುಃ ಮಾನ್ಯ ಸ. ಸ. ಅ. ರವರಿಂದಃ

ದಿನಾಂಕ 28-7-2017 ರಂದು ಉಜಿರೆ ಗ್ರಾಮದ ಕಲ್ಲೆ ಎಂಬಲ್ಲಿ 1 ನೇ ಆರೋಪಿ ವಾಸ್ತವ್ಯ ಇದ್ದ ಬಾಡಿಗೆ ಮನೆಯಲ್ಲಿ ಪಂಚರಾದ ಚಾಸಾ-10 ಮತ್ತು 11 ರವರ ಸಮಕ್ಷಮ ಬೆಳಗ್ಗೆ

This is a True Copy of the Court Records Online. Authenticated @ districts.ecourtsindia.com/cnr/KADK510015592017/truecopy/order-4.pdf

8-30 ರಿಂದ 10-30 ಗಂಟೆ ವರೆಗೆ ಸ್ವತ್ತು ಸ್ವಾಧೀನ ಮಹಜರ್ ಜರುಗಿಸಿ 1 ನೇ ಆರೋಪಿ ಹಾಜರುಪಡಿಸಿದ ಸುಮಾರು 6.047 ಗ್ರಾಂ ತೂಕದ ಚಿನ್ನದ ಸರ, 12.105 ಗ್ರಾಂ ತೂಕದ ಚಿನ್ನದ ಕೈ ಬಳೆಗಳು -2, 25.360 ಗ್ರಾಂ ತೂಕದ ಕರಿಮಣಿ ಸರ -1, 4.450 ಗ್ರಾಂ ತೂಕದ ಮಕ್ಕಳ ಸೊಂಟದ ನೂಲು -2 ಇವುಗಳನ್ನು ಪರಿಶೀಲಿಸಿ ತೂಕ ಮಾಪನದ ಮೂಲಕ ತೂಕ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ದಿನಾಂಕ 2-4-2017 ರಂದು ಬೆಳಗ್ಗೆ ಸುಮಾರು 11-40 ಗಂಟೆಗೆ ಬೆಳ್ತಂಗಡಿ ತಾಲೂಕು ತೆಂಕಕಾರಂದೂರು ಗ್ರಾಮದ ಬಜನೋಡಿ ಎಂಬಲ್ಲಿ ಫ್ರಾಯಸ್ತ ಹೆಂಗಸಿನ ಕುತ್ತಿಗೆಯಿಂದ ಸುಲಿಗೆ ಮಾಡಿದ ಸ್ವತ್ತು ಎಂದು ತಿಳಿದಿರುತ್ತೇನೆ ಎಂದರೆ ಸರಿಯಲ್ಲ. ಅಲ್ಲದೆ ಇತರೆ ಕೆಲವು ಸ್ವತ್ತುಗಳನ್ನೂ ಸಹ ಪೊಲೀಸರು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-7 ಕ್ಕೆ ನಾನು ಸ್ಥಳದಲ್ಲಿ ಸಹಿ ಮಾಡಿದ್ದು ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರ ಸರಿಯಲ್ಲ. ಈಗ ಓದಿ ಹೇಳಿದಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ-8 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿಗಳ ಪರ ಕು. ಯಕ್ಷಿತ ವಕೀಲರಿಂದಃ

ಏನೂ ಇರುವುದಿಲ್ಲ.

ಮರು ವಿಚಾರಣೆ ಇರುವುದಿಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ. ದ. ನ್ಯಾ. ದಂ.ಗಳು ಬೆಳ್ತಂಗಡಿ.

**(ಸಾ. ಓ. ಹೇ. ಕೇ. ಸ. ಇ. ಎ. ಒ.)**

This is a True Copy of the Court Records Online. Authenticated @ districts.ecourtsindia.com/cnr/KADK510015592017/truecopy/order-4.pdf